ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ : 03 ನೇ ಫೆಬ್ರುವರಿ, 2021

ದಕ್ಷಿಣ ಕನ್ನಡ ಜಿಲ್ಲೆಯ ರಸ್ತೆಗಳು ಹದಗೆಟ್ಟಿರುವ ಬಗ್ಗೆ

ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :-

254 (329) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಗೆ ಒಳಪಡುವ ರಸ್ತೆಗಳು ಯಾವುವು ; (ರಾಜ್ಯ ಮತ್ತು ಜಿಲ್ಲಾ ಹೆದ್ದಾರಿಗಳ ಸಂಪೂರ್ಣ ಮಾಹಿತಿ ನೀಡುವುದು)

(ಆ) ಲೋಕೋಪಯೋಗಿ ಇಲಾಖೆಯ ರಸ್ತೆಗಳು ಸಂಪೂರ್ಣ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಕಳೆದ 2 ವರ್ಷದಲ್ಲಿ ಈ ರಸ್ತೆಗಳ ದುರಸ್ಥಿ ಕಾಮಗಾರಿಗಾಗಿ ನಿಗಧಿಪಡಿಸಿ, ಬಿಡುಗಡೆ ಮಾಡಿ, ವೆಚ್ಚವಾಗಿರುವ ಮೊತ್ತವೆಷ್ಟು ;

(ಈ) ಪೂರ್ಣಗೊಂಡಿರುವ ಕಾಮಗಾರಿಗಳೆಷ್ಟು; ಮತ್ತು ಅಪೂರ್ಣಗೊಂಡಿರುವ ಕಾಮಗಾರಿಗಳೆಷ್ಟು ?